51

**ನಗರಾಭಿವೃದ್ಧಿ ಇಲಾಖೆ**

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ, ಇವರು ನಿಯಮ 72 ರಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ.**

---

**ವಿ ಷ ಯ :**

ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸುಮಾರು 300ಕ್ಕೂ ಅಧಿಕ ಅನಧಿಕೃತ ಜಾಹಿರಾತು ಫಲಕಗಳನ್ನು ಅಳವಡಿಸಿದ್ದರೂ, ಅದನ್ನು ಸಕ್ರಮಗೊಳಿಸದೆ ಅನಧಿಕೃತ ಜಾಹಿರಾತುಗಳಿಗೆ ಪ್ರೋತ್ಸಾಹ ನೀಡಿ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟುಮಾಡುತ್ತಿರುವ ನಗರ ಪಾಲಿಕೆ ಆಯುಕ್ತರ ಮೇಲೆ ಕ್ರಮಕೈಗೊಳ್ಳದೇ ಇರುವ ಬಗ್ಗೆ.

**ಉ ತ್ತ ರ :**

ಕರ್ನಾಟಕ ಮಹಾನಗರಪಾಲಿಕೆ ಅಧಿನಿಯಮ, 1976 ರ ಕಲಂ 134 ರನ್ವಯ ಪಾಲಿಕೆ ವ್ಯಾಪ್ತಿಯಲ್ಲಿ ಯಾವುದೇ ಜಾಹೀರಾತು ಪ್ರದರ್ಶಿಸಲು ಪಾಲಿಕೆಯ ಅನುಮತಿ ಪಡೆಯುವುದು ಕಡ್ಡಾಯವಾಗಿರುತ್ತದೆ. ಪಾಲಿಕೆ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಅಳವಡಿಸಿರುವ ಜಾಹೀರಾತು ಫಲಕಗಳನ್ನು ಸಕ್ರಮಗೊಳಿಸಲು ಅವಕಾಶವಿಲ್ಲ. ಮಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಈಗಾಗಲೇ 12 ಹೋರ್ಡಿಂಗ್ಸ್ ಗಳನ್ನು ತೆರವುಗೊಳಿಸಲಾಗಿರುತ್ತದೆ. ಪಾಲಿಕೆ ವ್ಯಾಪ್ತಿಯಲ್ಲಿ ಇರುವ ಅನಧಿಕೃತ ಜಾಹೀರಾತು ಫಲಕಗಳನ್ನು ಗುರುತಿಸಿ ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ: 579902/2017 (LB-RES-PIL) ರಲ್ಲಿನ ದಿನಾಂಕ: 25.11.2019ರ ಆದೇಶದಲ್ಲಿ, ನೀಡಿರುವ ಮಧ್ಯಂತರ ನಿರ್ದೇಶನದಂತೆ The Karnataka Open Places (Prevention of Disfigurement) Act, 1981 ರ ಕಲಂ 2 ರಲ್ಲಿ ವ್ಯಾಖ್ಯಾನಿಸಿರುವ ಜಾಹೀರಾತು ಪದದ ಅರ್ಥವ್ಯಾಪ್ತಿಗೆ ಒಳಪಟ್ಟು, ರಾಜ್ಯದ ಎಲ್ಲಾ ಮಹಾನಗರಪಾಲಿಕೆಗಳು (ಬಿಬಿಎಂಪಿ ಹೊರತುಪಡಿಸಿ), ನಗರಸಭೆಗಳು, ಪುರಸಭೆಗಳು ಮತ್ತು ಪಟ್ಟಣ ಪಂಚಾಯತಿಗಳ ಆಡಳಿತ ಪ್ರದೇಶ ವ್ಯಾಪ್ತಿಯಲ್ಲಿನ ಜಾಹೀರಾತು ಪ್ರದರ್ಶನ / ಪ್ರಚಾರಕ್ಕೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯದ ಆದೇಶವನ್ನು ಹಾಗೂ ಕಾಯ್ದೆಯ ಅವಕಾಶಗಳನ್ವಯ ನಿಯಮಾನುಸಾರ ಕಟ್ಟುನಿಟ್ಟಾಗಿ ಪಾಲಿಸುವಂತೆ ಈಗಾಗಲೇ ಸರ್ಕಾರದ ಪತ್ರ ಸಂಖ್ಯೆ: ನಅಇ 54 ಎಂಎನ್ಇ 2019, ದಿನಾಂಕ 17.12.2019 ರಂತೆ ಮಂಗಳೂರು ಮಹಾನಗರಪಾಲಿಕೆಯು ಒಳಗೊಂಡಂತೆ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಸೂಚನೆ ನೀಡಲಾಗಿದೆ.

ನಅಇ 21 ಎಂಎಂಸಿ 2020ಇ

(ಬಿ.ಎ.ಬಸವರಾಜ)
ನಗರಾಭಿವೃದ್ಧಿ ಸಚಿವರು